ಇ) ಪಟ್ಟಣದ ಕುಡಿಯುವ ನೀರಿನ ಅಭಾವ ನೀಗಿಸಲು ವಿವಿಧ ಬಡಾವಣೆಗಳಲ್ಲಿ ಕೊಳವೆಬಾವಿ ಕೊರೆಯುವುದು, ಪಂಪ್ ಅಳವಡಿಸುವುದು ಹಾಗೂ ಪೈಪ್‌ಲೈನ್ ಹಾಕುವ ಕಾಮಗಾರಿಯನ್ನು ಕೈಗೊಳ್ಳಲು ಉದ್ದೇಶಿಸಲಾಗಿದ್ದು ಇದಕ್ಕಾಗಿ ಕ್ರಿಯಾ ಯೋಜನೆಯನ್ನು ಸಿದ್ಧಪಡಿಸಿ ರೂ. 31.89 ಲಕ್ಷಗಳನ್ನು ಬಿಡುಗಡೆಗೊಳಿಸುವ ಪ್ರಸ್ತಾವನೆ ಪರಿಶೀಲನೆಯಲ್ಲಿದೆ.

2341(3100) ಶ್ರೀ ನಿಂಗಪ್ಪ ಹೆಚ್. (ಕುಣಿಗಲ್):– ಮಾನ್ಯ ಮುಖ್ಯಮಂತ್ರಿಗಳು ಈ ಕೆಳಗಿನ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ತುಮಕೂರು ಜಿಲ್ಲೆಯಲ್ಲಿ ಅಕ್ರಮ ಗಣಿಗಾರಿಕೆ ನಡೆಯುತ್ತಿದ್ದು ಅದರಲ್ಲೂ ಮುಖ್ಯವಾಗಿ ಚಿಕ್ಕನಾಯಕನಹಳ್ಳಿ ತಾಲ್ಲೂಕಿನಲ್ಲಿ ವ್ಯಾಪಕವಾಗಿದೆ ಎಂಬುದು ಸರ್ಕಾರದ ಗಮನಕ್ಕೆ ಬಂದಿದೆಯೇ:

ಆ) ಬಂದಿದ್ದಲ್ಲಿ, ಇದನ್ನು ತಡೆ ಗಟ್ಟಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು?

ಶ್ರೀ ಧರ್ಮಸಿಂಗ್ (ಮುಖ್ಯಮಂತ್ರಿಗಳು)

ಅ) ತುಮಕೂರು ಜಿಲ್ಲೆ ಚಿಕ್ಕನಾಯಕನಹಳ್ಳಿ ತಾಲ್ಲೂಕಿನ ಕೆಲವು ಪ್ರದೇಶಗಳಲ್ಲಿ ಅಕ್ರಮ ಗಣಿಗಾರಿಕೆ ನಡೆಯುತ್ತಿದ್ದುದು ಸರ್ಕಾರದ ಗಮನಕ್ಕೆ ಬಂದಿರುತ್ತದೆ.

ಆ) ಗಣಿ ಗುತ್ತಿಗೆ ಪ್ರದೇಶಗಳನ್ನು ಕಂದಾಯ, ಅರಣ್ಯ ಮತ್ತು ಗಣಿ ಮತ್ತು ಭೂ ವಿಜ್ಞಾನ ಇಲಾಖೆ ಅಧಿಕಾರಿಗಳು ಜಂಟಿ ಮೋಜಣಿ ಮಾಡಿ, ಗಣಿಗುತ್ತಿಗೆ ಪ್ರದೇಶದ ಗಡಿಗಳನ್ನು ಗುರ್ತಿಸಿ ಗಣಿಗುತ್ತಿಗೆದಾರರ ನಾಮಫಲಕಗಳನ್ನು ನೆಡಿಸಲಾಗಿದೆ. ಅಕ್ರಮ ಗಣಿಗಾರಿಕೆಯಲ್ಲಿ ತೊಡಗಿದ್ದವರ ಮೇಲೆ ಎಂ & ಎಂ (ಡಿ & ಆರ್) ಕಾಯ್ದೆ, 1957ರ ಪ್ರಕಾರ ದಂಡ ವಿಧಿಸಿ ರೂ. 3,84,600.00ಗಳನ್ನು ವಸೂಲಿ ಮಾಡಲಾಗಿದೆ ಅಕ್ರಮ ಗಣಿಗಾರಿಕೆಯಿಂದ ದಾಸ್ತಾನು ಮಾಡಿದ್ದ ಖನಿಜವನ್ನು ವಶಪಡಿಸಿಕೊಂಡು ಬಹಿರಂಗ ಹರಾಜು ಮೂಲಕ ವಿಲೇವಾರಿ ಮಾಡಲು ಕ್ರಮ ಕೈಗೊಳ್ಳಲಾಗಿದೆ.

2342(3101) ಶ್ರೀ ನಿಂಗಪ್ಪ ಹೆಚ್. (ಕುಣಿಗಲ್):– ಮಾನ್ಯ ಜಲಸಂಪನ್ಮೂಲ ಮತ್ತು ಸಾರಿಗೆ ಸಚಿವರು ಈ ಕೆಳಗಿನ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ದೂರ ಪ್ರಯಾಣದ ಬಸ್‌ಗಳಲ್ಲಿ ಶೌಚಾಲಯವಿಲ್ಲದೆ ಪ್ರಕೃತಿ ಕರೆಗೆ (ಬಹಿರ್ದೆಶೆಗೆ) ಪ್ರಯಾಣೀಕರು ಪರದಾಡುವ ದೃಶ್ಯ ಸರ್ಕಾರದ ಗಮನಕ್ಕೆ ಬಂದಿದೆಯೆ;

ಆ) ಹಾಗಿದ್ದಲ್ಲಿ, ಶೌಚಾಲಯ ನಿರ್ಮಿಸಲು ಸರ್ಕಾರ ಕ್ರಮಕೈಗೊಳ್ಳುವುದೆ:

ಇ) ಯಾವ ಅವಧಿಯೊಳಗಾಗಿ ಶೌಚಾಲಯಗಳನ್ನು ನಿರ್ಮಿಸಲಾಗುವುದು?

ಶ್ರೀ ಮಲ್ಲಿಕಾರ್ಜುನ ಖರ್ಗೆ (ಜಲಸಂಪನ್ಮೂಲ ಮತ್ತು ಸಾರಿಗೆ ಸಚಿವರು)

ಅ) ಇಲ್ಲ

ಆ) ಉದ್ಭವಿಸುವುದಿಲ್ಲ.

ಇ) ಉದ್ಭವಿಸುವುದಿಲ್ಲ.